ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 19/4/21

# ಆಮ್ಲಜನಕ ವಾರ್ ರೂಂ ಶುರು

ಬೆಂಗಳೂರು: ಆಕ್ಸಿಜನ್ ಕೊರತೆ ಇದೆ ಎಂದು ಖಾಸಗಿ ಆಸ್ಪತ್ರೆಗಳು ಹೇಳುತ್ತಿರುವಾಗಲೇ, ಯಾವುದೇ ಕೊರತೆ ಇಲ್ಲ ಎಂದು ಸರ್ಕಾರ ಸ್ಪಷ್ಟನೆ ನೀಡಿದೆ. ಕರೊನಾ ಸೋಂಕಿತರ ಚಿಕಿತ್ಸೆಗೆ ಅಗತ್ಯವಿರುವ ವೈದ್ಯಕೀಯ ಆಮ್ಲಜನಕ ಪೂರೈಕೆಗೆ ಔಷಧ ನಿಯಂತ್ರಕರ ಕಚೇರಿಯಲ್ಲಿ ವಾರ್ ರೂಂ ರಚಿಸಲಾಗಿದೆ. ಹಾಗೆಯೇ ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ರಾಜ್ಯದಲ್ಲಿ ಆಮ್ಲಜನಕ ಕೊರತೆ ಇಲ್ಲ. ಇದಕ್ಕೆ ಸಂಬಂಧಿಸಿದಂತೆ ವಲಯವಾರು ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಈಗ ಇರುವ 800 ಮೆಟ್ರಿಕ್ ಟನ್ ಆಮ್ಲಜನಕ ಜತೆಗೆ 300 ಟನ್‌ಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಎಂದು ತಿಳಿಸಿದರು. ಫನಾ (ಖಾಸಗಿ ಆಸ್ಪತ್ರೆಗಳ ಸಂಘ) ಸಂಘಟನೆಯವರ ಜತೆ ಮಾತನಾಡಿದ್ದು, ಕಡಿಮೆ ಆಕ್ಸಿಜನ್ ಇರುವ ಕಡೆ ಜಂಬೋ ಆಕ್ಸಿಜನ್ ಕೊಟ್ಟಿದ್ದೇನೆ. ಸದ್ಯಕ್ಕೆ ಕೊರತೆ ಇಲ್ಲ. ದಯವಿಟ್ಟು ತಪ್ಪು ಮಾಹಿತಿ ಕೊಡಬೇಡಿ. ಮನಸೋ ಇಚ್ಛೆ ಬರೆಯಬೇಡಿ ಎಂದು ಮಾಧ್ಯಮಗಳಿಗೆ ಸಲಹೆ ನೀಡಿದರು.



ಖಾಸಗಿಯವರು ಹಣ ಪಾವತಿಸದೆ ಇರುವುದರಿಂದ ಆಮ್ಲಜನಕ ಸಿಕ್ಕಿಲ್ಲದೇ ಹೋಗಿರಬಹುದು. ಹೀಗೆಂದು ಆಕ್ಸಿಜನ್ ಕೊರತೆ ಇದೆ ಅನ್ನೋದು ಸರಿಯಲ್ಲ.

| ಡಾ.ಕೆ.ಸುಧಾಕರ್ ಆರೋಗ್ಯ ಸಚಿವ

## ರಾಜ್ಯದ ಆಕ್ಸಿಜನ್ ಸ್ಥಿತಿಗತಿ

- ದೈನಂದಿನ ಆಕ್ಸಿಜನ್ ಉತ್ಪಾದನಾ ಸಾಮರ್ಥ್ಯ 812 ಮೆಟ್ರಿಕ್ ಟನ್
- ಈಗಿನ ಪರಿಸ್ಥಿತಿಯಲ್ಲಿ ಅಗತ್ಯ ಇರುವುದು 200 ಮೆಟ್ರಿಕ್ ಟನ್
- ಪ್ರಸ್ತುತ ಲಭ್ಯ ಇರುವುದು 300 ಮೆಟ್ರಿಕ್ ಟನ್
- ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮಂಜೂರಾಗಿರುವುದು 300 ಮೆಟ್ರಿಕ್ ಟನ್

## ಖಾಸಗಿ ಆಸ್ಪತ್ರೆಗಳಿಗೆ ಸಚಿವದ್ವಯರ ಎಚ್ಚರಿಕೆ

ಕರೊನಾ ದೃಢಪಟ್ಟ ವ್ಯಕ್ತಿಗಳನ್ನು ದಾಖಲಿಸಿಕೊಂಡು ಚಿಕಿತ್ಸೆ ನೀಡುವ ವಿಷಯದಲ್ಲಿ ಖಾಸಗಿ ಆಸ್ಪತ್ರೆಗಳ ಕಾರ್ಯವೈಖರಿ ಸಮಾಧಾನಕರವಾಗಿಲ್ಲ ಎಂದು ಸಚಿವರಾದ ಆರ್.ಅಶೋಕ್ ಹಾಗೂ ಡಾ.ಕೆ. ಸುಧಾಕರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಶೇ.50 ಹಾಸಿಗೆಗಳನ್ನು ಮೀಸಲಿಡದಿದ್ದರೆ ನೋಟಿಸ್ ನೀಡಿ ಕ್ರಮಕೈಗೊಳ್ಳುತ್ತೇವೆ ಎಂದು ಆರ್.ಅಶೋಕ್ ಎಚ್ಚರಿಸಿದರೆ, ಸಂಕಷ್ಟ ಸಂದರ್ಭದಲ್ಲಿ ಸರ್ಕಾರದ ಆದೇಶ ಪಾಲಿಸಲೇಬೇಕು ಎಂದು ಸುಧಾಕರ್ ಖಡಕ್ ಆಗಿ ಹೇಳಿದ್ದಾರೆ. ಲಾಕ್‌ಡೌನ್ ಬಗ್ಗೆ ಕೆಲವರು ವೈಯಕ್ತಿಕ ಅಭಿಪ್ರಾಯ, ಆಶಯ ವ್ಯಕ್ತಪಡಿಸಿರಬಹುದು. ತಜ್ಞರ ಸಲಹೆ, ಸಿಎಂ ನಿರ್ದೇಶನದಂತೆ ಮುಂದಿನ ಹೆಜ್ಜೆ ಇಡುತ್ತೇವೆ ಎಂದಿದ್ದಾರೆ.



ಕಳೆದೊಂದು ವರ್ಷದಲ್ಲಿ ಕರೊನಾ ಎದುರಿಸಲು ಸರ್ಕಾರ ಯಾವುದೇ ತಯಾರಿ ನಡೆಸಿಲ್ಲ. ಮನೆಗೆ ಬೆಂಕಿ ಬಿದ್ದಾಗ ಬಾವಿ ತೋಡಲು ಹೊರಟಿದ್ದಾರೆ. ಒಂದು ವರ್ಷ ಸರ್ಕಾರಕ್ಕೆ ಎಲ್ಲ ರೀತಿಯ ಸಹಕಾರ ಕೊಟ್ಟಿದ್ದೆವು. ಈಗ ಕೈಮೀರಿ ಹೋಗಿದೆ ಎಂದು ಆರೋಗ್ಯ ಸಚಿವರು ಹೇಳುತ್ತಿದ್ದಾರೆ. ಸರ್ಕಾರ ಇದೆಯೋ ಇಲ್ಲವೋ ಗೊತ್ತಾಗುತ್ತಿಲ್ಲ. ಪರಿಸ್ಥಿತಿ ನಿಭಾಯಿಸಲು ಸಾಧ್ಯವಿಲ್ಲವೆಂದಾದರೆ ರಾಜೀನಾಮೆ ಕೊಟ್ಟು ಹೋಗಲಿ.

| ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷ